# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 291 (409) |
| ಸದಸ್ಯರ ಹೆಸರು | : | ಶ್ರೀಎಂ.ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 15.12.2021 |
| ಉತ್ತರಿಸುವ ಸಚಿವರು | : | ಮಾನ್ಯ ಕಂದಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ವಿವಿಧ ಯೋಜನೆಗಳಿಗಾಗಿ ರೈತರಿಂದ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆ ಕುರಿತು ಮಾಹಿತಿ ನೀಡುವುದು. | ಸಾರ್ವಜನಿಕ ಉದ್ದೇಶದ ಸರ್ಕಾರದ ವಿವಿಧ ಯೋಜನೆಗಳಿಗಾಗಿ, ಕೋರಿಕಾ ಇಲಾಖೆಗಳು ಸಲ್ಲಿಸುವ ಪ್ರಸ್ತಾವನೆಗಳಿಗನುಗುಣವಾಗಿ ಕಂದಾಯ ಇಲಾಖೆಯಿಂದ "ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ, ಸೂಕ್ತ ಪರಿಹಾರ ಹಕ್ಕು, ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಕಾಯ್ದೆ - 2013"ರಡಿ ಭೂಸ್ವಾಧೀನ ಪ್ರಕ್ರಿಯೆಯನ್ನು ನಡೆಸಲಾಗುತ್ತದೆ.<br><br>ಇದಲ್ಲದೆ, ಸದರಿ ಕಾಯ್ದೆಯ ಕಲಂ-46 ರಡಿ ನೇರ ಖರೀದಿ ಮೂಲಕ ಖರೀದಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. |
| ಆ) | ಭೂಸ್ವಾಧೀನ ಪಡಿಸಿಕೊಂಡ ಎಷ್ಟು ದಿನಗಳಲ್ಲಿ ರೈತರಿಗೆ ಪರಿಹಾರದ ಮೊತ್ತವನ್ನು ನೀಡಲಾಗುವುದು. | ಮೇಲ್ಕಂಡ ಕಾಯ್ದೆಯನುಸಾರ ಪ್ರಾಥಮಿಕ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಎರಡು ವರ್ಷದೊಳಗಾಗಿ ಐ-ತೀರ್ಪನ್ನು ಸಿದ್ಧಪಡಿಸಬೇಕಾಗಿದ್ದು, ಐತೀರ್ಪು ಅನುಮೋದನೆಯಾದ ನಂತರ 01 ತಿಂಗಳೊಳಗಾಗಿ ಭೂಮಾಲೀಕರಿಗೆ ಪರಿಹಾರ ಪಾವತಿಸಲಾಗುತ್ತದೆ. |
| ಇ) | ಕಳೆದ (2) ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಪ್ರದೇಶದ ಭೂಮಿಯನ್ನು ಯಾವ ಯಾವ ಯೋಜನೆಗಳಿಗೆ ಭೂಸ್ವಾಧೀನಪಡಿಸಿಕೊಳ್ಳಲಾಗಿದೆ.<br><br>(ಜಿಲ್ಲಾವಾರುಮಾಹಿತಿ ನೀಡುವುದು) | ಕಳೆದ ಎರಡು ವರ್ಷಗಳಲ್ಲಿ ಭೂಸ್ವಾಧೀನಪಡಿಸಿಕೊಂಡ ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-1ರಲ್ಲಿ ಲಗತ್ತಿಸಿದೆ. |
| ಈ) | ಕಳೆದ(2)ವರ್ಷಗಳಲ್ಲಿ ಭೂಮಿಯನ್ನು ಕಳೆದುಕೊಂಡ ಎಷ್ಟು ಫಲಾನುಭವಿಗಳಿಗೆ ಪರಿಹಾರವನ್ನು ನೀಡಲಾಗಿದೆ? ಹಾಗೂ ಎಷ್ಟು ಫಲಾನುಭವಿಗಳಿಗೆ ನೀಡಲಾಬೇಕಾಗಿದೆ? ಯಾವ ಕಾಲಮಿತಿಯೊಳಗೆ ಉಳಿದವರಿಗೆ ಪರಿಹಾರವನ್ನು ನೀಡಲಾಗುವುದು? | ಮಾಹಿತಿಯನ್ನು ಅನುಬಂಧ-2ರಲ್ಲಿ ಲಗತ್ತಿಸಿದೆ. |

ಸಂಖ್ಯೆ:ಕಂಇ 04 ಎಕ್ಯೂಜಿಆರ್ 2021

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು